**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊನ್ನಾವರ**

**ಸಿ. ಸಿ. ನಂ. 54/2023**

**ಚಾ.ಸಾಃ 15, ಫ್ರಾ.ಸಾಃ 7**

| | |
|---|---|
| ಸಾಕ್ಷಿದಾರನ ಹೆಸರು | ಶ್ರೀಮತಿ ವೈಲೇಟ್ ಫೇಮಿನಾ |
| ಗಂಡನ ಹೆಸರು | ಡೇವಿಡ್ |
| ವಯಸ್ಸು | 53 ವರ್ಷಗಳು |
| ಉದ್ಯೋಗ | ಪೊಲೀಸ್-ಉಪ ನಿರೀಕ್ಷಕರು, ಸಿ ಎಸ್ ಪಿ ಮಲ್ಪೆ |
| ವಾಸ್ತವ್ಯ | ಮಣಿಪಾಲ |

**ಸಾಕ್ಷಿಯನ್ನು ದಿನಾಂಕಃ 07-02-2026 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ನಾನು ದಿನಾಂಕ 03-02-2023 ರಿಂದ 10-07-2023 ರ ವರೆಗೆ ಹೊನ್ನಾವರ ಪೋಲೀಸ್ ಠಾಣೆಯಲ್ಲಿ ಆರಕ್ಷಕ ಉಪ-ನಿರೀಕ್ಷಕಳಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 06-03-2023 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ಬೆಳಿಗ್ಗೆ 10-30 ಗಂಟೆಗೆ ಚಾ.ಸಾ. 1 ರವರು ಠಾಣೆಗೆ ಹಾಜರಾಗಿ ನೀಡಿದ ದೂರನ್ನು ಪಡೆದುಕೊಂಡು ಠಾಣಾ ಮೊಕದ್ದಮೆ ನಂ.45/2023 ರಂತೆ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ದೂರನ್ನು ನೋಡುತ್ತಿದ್ದು ಅದನ್ನು ನಿಪಿ-1 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ನೋಡುತ್ತಿದ್ದು ಅದನ್ನು ನಿಪಿ-9 ಎಂದು, ಸಾಕ್ಷಿ ಸಹಿಯನ್ನು ನಿಪಿ-9(ಎ) ಎಂದು ಗುರುತಿಸಲಾಯಿತು.

ಅದೇ ದಿನ ಘಟನಾ ಸ್ಥಳಕ್ಕೆ ಭೇಟಿ ನೀಡಿ ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ ಪಂಚರ ಸಮಕ್ಷಮ ಮಧ್ಯಾಹ್ನ 12-15 ರಿಂದ 01-00 ಗಂಟೆ ಸಮಯದಲ್ಲಿ ಸ್ಥಳ ಪಂಚನಾಮೆ ತಯಾರಿಸಿ, ಸ್ಥಳದ ಫೋಟೋ ತೆಗೆಸಿರುತ್ತೇನೆ. ಪಂಚನಾಮೆಯನ್ನು ನೋಡುತ್ತಿದ್ದು ಅದನ್ನು ನಿಪಿ-2 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು. ಫೋಟೋವನ್ನು ನಿಪಿ-3 ಎಂದು ಗುರುತಿಸಲಾಗಿದೆ.

ಆರೋಪಿಯ ಪತ್ತೆಗಾಗಿ ಚೆಕ್ ಪೋಸ್ಟ ಸಿಬ್ಬಂದಿಗಳಿಗೆ ಮಾಹಿತಿ ನೀಡಿರುತ್ತೇನೆ. ಅದೇ ದಿನ ಮದ್ಯಾಹ್ನ 12-15 ಗಂಟೆ ಸಮಯಕ್ಕೆ ನಾನು ಪಂಚನಾಮೆ ಮಾಡುತ್ತಿರುವ ಸಮಯಕ್ಕೆ ಚಾ.ಸಾ. 10 ಚೆಕ್ ಪೋಸ್ಟ ಸಿಬ್ಬಂದಿ ಫೋನ್ ಮಾಡಿ ಸಂಶಯಾಸ್ಪದವಾಗಿ ಬೈಕ್ ನಲ್ಲಿ ಓಡಾಡುತ್ತಿದ್ದ ವ್ಯಕ್ತಿಯನ್ನು ಹಿಡಿದಿರುವುದಾಗಿ ತಿಳಿಸಿರುತ್ತಾರೆ. ತಕ್ಷಣ ನಾನು ಚಾ.ಸಾ. 12 ರವರಿಗೆ ಇಲಾಖಾ ಜೀಪ್ ನ್ನು ಕೊಟ್ಟು ಚೆಕ್ ಪೋಸ್ಟ ಹತ್ತಿರ ಕಳುಹಿಸಿರುತ್ತೇನೆ. ಮಧ್ಯಾಹ್ನ 1.40 ರ ಸಮಯಕ್ಕೆ ಚಾ.ಸಾ. 11 ಮತ್ತು 12 ರವರು ಸದರಿ ಅನುಮಾನಾಸ್ಪದ ವ್ಯಕ್ತಿಯನ್ನು ಠಾಣೆಗೆ ಕರೆತಂದಿರುತ್ತಾರೆ. ಆತನನ್ನು ವಿಚಾರಣೆಗೆ ಒಳಪಡಿಸಿದಾಗ ತಾನು ಮೋಟಾರ್ ಸೈಕಲನ್ನು ಕಳುವು ಮಾಡಿ ಅದರ ಮೂಲಕ ಫಿರ್ಯಾದಿಯ ಮನೆಯಲ್ಲಿ ಕಳುವು ಮಾಡಿರುವುದಾಗಿ ಒಪ್ಪಿಕೊಂಡಿರುತ್ತಾರೆ. ನಂತರ ಆತನನ್ನು ಬಂಧಿಸಿ ಸ್ವ ಖುಷಿ ಹೇಳಿಕೆಯನ್ನು

ಪಡೆದಿರುತ್ತೇನೆ. ಚಾ.ಸಾ. 10 ರವರು ಅನುಮಾನಿತ ಆರೋಪಿ ಬಳಸಿದ್ದ ಬೈಕನ್ನು ಠಾಣೆಯ ಮುಂದೆ ಹಾಜರುಪಡಿಸಿರುತ್ತಾರೆ. ಸದರಿ ಬೈಕನ್ನು ಠಾಣಾ ಆವರಣದಲ್ಲಿ ಪಂಚರ ಸಮಕ್ಷಮ ಪಂಚನಾಮೆ ಮಾಡಿ ಅಮಾನತ್ತುಪಡಿಸಿ ಠಾಣಾ ಫಿ ಎಫ್ ನಲ್ಲಿ ನಮೂದಿಸಿರುತ್ತೇನೆ. ಪಂಚನಾಮೆಯನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-7 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-7(ಸಿ) ಎಂದು ಗುರುತಿಸಲಾಯಿತು. ಆ ಕಾಲಕ್ಕೆ ತೆಗೆದ ಪೋಟೋಗಳನ್ನು ನಿ.ಪಿ. 5 ಮತ್ತು 6 ಎಂದು ಗುರುತಿಸಲಾಗಿದೆ.

ನಂತರ ಆರೋಪಿಯು ಕೃತ್ಯ ನಡೆದ ಸ್ಥಳವನ್ನು ತೋರಿಸುವುದಾಗಿ ಹೇಳಿಕೆ ನೀಡಿದ್ದು ಅದರಂತೆ ಚಾ.ಸಾ. 6 ಮತ್ತು 7 ರವರನ್ನು ಪಂಚರನ್ನಾಗಿ ಆರೋಪಿಯೊಡನೆ ಕರೆದುಕೊಂಡು ಬಂದಿದ್ದು, ಆರೋಪಿಯು ಫಿರ್ಯಾದಿಯ ಮನೆಯ ಹತ್ತಿರ ನಮ್ಮನ್ನು ಕರೆದುಕೊಂಡು ಬಂದು ಕೃತ್ಯ ಸ್ಥಳವನ್ನು ತೋರಿಸಿರುತ್ತಾರೆ. ಸದರಿ ಸ್ಥಳದಲ್ಲಿ ಸ್ಥಳ ಪಂಚನಾಮೆಯನ್ನು ಮಾಡಿರುತ್ತೇನೆ ಮತ್ತು ಆ ಕಾಲಕ್ಕೆ ಒಂದು ಪೊಟೋ ತೆಗೆಸಿರುತ್ತೇನೆ. ಸದರಿ ಪಂಚನಾಮೆಯನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-8 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-8(ಬಿ) ಎಂದು ಗುರುತಿಸಲಾಯಿತು. ಆ ಕಾಲಕ್ಕೆ ತೆಗೆದ ಪೋಟೋವನ್ನು ನಿ.ಪಿ. 4 ಎಂದು ಗುರುತಿಸಲಾಗಿದೆ.

ನಂತರ ಆರೋಪಿಯನ್ನು ಸೂಕ್ತ ಬೆಂಗಾವಲಿನೊಂದಿಗೆ ಮಾನ್ಯ ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ಅದೇ ದಿನ ಫಿರ್ಯಾದಿಯ ಮರುಹೇಳಿಕೆ ಮತ್ತು ಚಾ.ಸಾ. 6 ಮತ್ತು 8 ರವರ ಹೇಳಿಕೆಯನ್ನು ಪಡೆದಿರುತ್ತೇನೆ.

ದಿನಾಂಕಃ 09-03-2023 ರಂದು ಕಳುವು ಬೈಕಿನ ವಾರಸುದಾರರ ಪತ್ತೆಗೆ ಸಾಗರ ಪೊಲೀಸರಿಗೆ ಮಾಹಿತಿ ನೀಡಿರುತ್ತೇನೆ.

ದಿನಾಂಕಃ 03-06-2023 ರಂದು ಚಾ.ಸಾ. 13 ರಿಂದ ಕಲಂ 65 ಬಿ ಪ್ರಮಾಣ ಪತ್ರವನ್ನು ಪಡೆದಿರುತ್ತೇನೆ. ಈಗ ಅದನ್ನು ನೋಡುತ್ತಿದ್ದು ಅದನ್ನು ನಿಪಿ-10 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಯಿತು.

ನಂತರ ತನಿಖೆ ಪೂರೈಸಿ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

**ಪಾಟೀ ಸವಾಲುಃ ಶ್ರೀಮತಿ ವಿ. ಎಮ್.ಎನ್. ವಕೀಲರು ಎ ಎಲ್ ಎ ಡಿ ಸಿ ಕಾರವಾರ ರಿಂದಃ**

ದೂರು ಕೊಡಲು ಫಿರ್ಯಾದಿ ಒಬ್ಬರೇ ಬಂದಿದ್ದರು. ಚಾ.ಸಾ. 1 ರವರ ಸುಳ್ಳು ದೂರಿಗೆ ಅನುಗುಣವಾಗಿ ಸುಳ್ಳು ಪ್ರಕರಣ ದಾಖಲಿಸಿದ್ದೇನೆ ಎಂದರೆ ಸರಿಯಲ್ಲ. ಪಂಚನಾಮೆಯನ್ನು ಪೊಲೀಸ್ ಠಾಣೆಯಲ್ಲಿ ತಯಾರಿಸಿದ್ದೇನೆ ಎಂದರೆ ಸರಿಯಲ್ಲ. ಪ್ರಕರಣದಲ್ಲಿ ಯಾವುದೇ ಆರೋಪಿಯನ್ನು ಹಿಡಿದಿರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿ ನಮ್ಮನ್ನು ಯಾವುದೇ ಸ್ಥಳಕ್ಕೆ ಕರೆದುಕೊಂಡು ಹೋಗಿರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿ ಯಾವುದೇ ಸ್ವ ಇಚ್ಚಾ ಹೇಳಿಕೆ ನೀಡಿದ್ದು ಇರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿಗೂ ಬೈಕಿಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ಕೇಸಿಗೆ ಅನುಕೂಲ ಆಗುವಂತೆ ಪೊಟೋಗಳನ್ನು ತೆಗೆಸಿ ದಾಖಲೆಗಳನ್ನು ಸೃಷ್ಟಿಸಿ ಹಾಜರುಪಡಿಸಿದ್ದೇನೆ ಎಂದರೆ

ಸರಿಯಲ್ಲ. ಆರೋಪಿಯ ವಿರುದ್ಧ ಯಾವುದೇ ಆಪಾದನೆ ಕಂಡುಬರದೇ ಇದ್ದರೂ ಸರಿಯಾಗಿ ತನಿಖೆ ಮಾಡದೇ ಸುಳ್ಳು ದೋಷಾರೋಪಣಾ ಪಟ್ಟಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇರುವುದಿಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

**Sd/-**

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**